## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಎಸ್.ಎಂ.ಕುರ್ತಕೋಟಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಸವಣೂರು, ಇವರ ವಿರುದ್ದ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಮಾನ್ಯ ಲೋಕಾಯುಕ್ತರವರಿಗೆ ವಹಿಸುವ ಕುರಿತು.

**ಓದಲಾಗಿದೆ:**
1. ಮಾನ್ಯ ಉಪಲೋಕಾಯುಕ್ತರು, ಇವರು ಕರ್ನಾಟಕ ಲೋಕಾಯಕ್ತ ಕಾಯ್ದೆ 1984ರ ಕಲಂ 12(3) ರಡಿ ಸಲ್ಲಿಸಿರುವ ವರದಿಸಂಖ್ಯೆ:ಕಂಪ್ಲೇಂಟ್/ ಉಪಲೋಕ್/ಬಿಜಿಎಂ/8676/2015/ಸನಿಕಾಸ-1, ದಿನಾಂಕ:27.09.2016
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರ ಅ.ಸ.ಪತ್ರ ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ಬಿಜಿಎಂ/8676/2015/ಸನಿಕಾಸ-1, ದಿನಾಂಕ: 03.10.2016.

****

**ಪ್ರಸ್ತಾವನೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರು ಮೇಲೆ ಓದಲಾದ(2)ರಲ್ಲಿ ಓದಲಾದ ಪತ್ರದೊಂದಿಗೆ, ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರ ಕಲಂ 12(3) ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರವರು ಮೇಲೆ(1) ರಲ್ಲಿ ಓದಲಾದಂತೆ ನೀಡಿರುವ ವರದಿ ಹಾಗೂ ಇತರ ದಾಖಲೆಗಳನ್ನು ಸರ್ಕಾರಕ್ಕೆ ಕಳುಹಿಸಿ, ಸದರಿ ವರದಿಯಲ್ಲಿನ ಶಿಫಾರಸ್ಸಿನಂತೆ ಕ್ರಮ ಕೈಗೊಂಡು, ಕೈಗೊಂಡ ಕ್ರಮದ ಬಗ್ಗೆ ತಿಳಿಸುವಂತೆ ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರವರ ವರದಿ ಹಾಗೂ ಇತರೆ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿದೆ. ಹಾವೇರಿ ಜಿಲ್ಲೆ ಸವಣೂರು ತಾಲ್ಲೂಕು ಪಂಚಾಯತ್ ಕಾರಡಗಿ ಮತ ಕ್ಷೇತ್ರದ ವ್ಯಾಪ್ತಿಯಲ್ಲಿಯ ಅಭಿವೃದ್ಧಿ ಕಾಮಗಾರಿಗಳ ಸಂಪೂರ್ಣ ವಿವರವನ್ನು ಕೊಡುವಂತೆ ಎದುರುದಾರರನ್ನು ಕೇಳಿದ್ದು, ಎದುರುದಾರರು ತಪ್ಪು ಮಾಹಿತಿಯನ್ನು ಕೊಟ್ಟದ್ದು, ಸವಣೂರು ತಾಲ್ಲೂಕಿನ ಚವಡಾಳ ಗ್ರಾಮದಲ್ಲಿ ಅಲ್ಪಸಂಖ್ಯಾತರು ಇರದೆ ಇದ್ದರೂ ಸಹ ಮತ್ತು ಅಲ್ಲಿ ಉರ್ದು ಶಾಲೆ ಇರದೆ ಇದ್ದರೂ ಸಹ ಸದರಿ ಗ್ರಾಮದ ಉರ್ದು ಶಾಲೆ ರಿಪೇರಿಗೆ ಎದುರುದಾರರು ರೂ. 80,000/-ಗಳ ಖರ್ಚು ತೋರಿಸಿ ಹಣವನ್ನು ದುರುಪಯೋಗ ಪಡಿಸಿಕೊಂಡಿದ್ದಾರೆ. ಅದೇ ರೀತಿ, ಇತರೆ ಎಲ್ಲಾ ಶಾಲೆಗಳ ರಿಪೇರಿ ಖರ್ಚಿಗೆಂದು ಹೇರಳವಾಗಿ ಖರ್ಚು ತೋರಿಸಿ, ಅವ್ಯವಹಾರ ಎಸಗಿರುತ್ತಾರೆಂದು ಆರೋಪಿಸಿ, ಸವಣೂರು ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ

ಅಧಿಕಾರಿಯಾಗಿದ್ದ ಶ್ರೀ ಎಂ.ಎಸ್.ಕುರ್ತಕೋಟಿ ಇವರ ವಿರುದ್ಧ ಶ್ರೀ ಮೌಲಾಸಾಬ್ ಆಲಿಸಾಬ್ ನಧಾಪ ಇವರು ನೀಡಿದ್ದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 9 ರನ್ವಯ ತನಿಖೆಗೆ ತೆಗೆದುಕೊಂಡಿದ್ದು, ದೂರಿನ ಬಗ್ಗೆ ಎದುರುದಾರರಿಂದ ಉತ್ತರವನ್ನು ಕೇಳಲಾಗಿ, 2013-14ನೇ ಸಾಲಿನ 13ನೇ ಹಣಕಾಸು ಆಯೋಗದ ಅನುದಾನದಲ್ಲಿ ಚವಡಾಳ ಗ್ರಾಮದ ಉರ್ದು ಶಾಲೆಗೆ ಡೆಸ್ಕ್ ಪೂರೈಸುವ ಬಗ್ಗೆ ಮಾಹಿತಿ ನೀಡಿದ್ದು, ಅದರಲ್ಲಿ ಕನ್ನಡ ಶಾಲೆಗೆ ಬದಲಾಗಿ ಉರ್ದು ಶಾಲೆಯೆಂದು ತಪ್ಪಾಗಿ ನಮೂದಿಸಿದ್ದು, ಕನ್ನಡ ಶಾಲೆಗೆ ಕ್ರೀಯಾ ಯೋಜನೆಯಲ್ಲಿ ರೂ. 0.80 ಲಕ್ಷ ಅನುದಾನ ನಿಗಧಿಪಡಿಸಿದ್ದು, ಆ ಅನುದಾನದಲ್ಲಿ ರೂ. 76,981/- ಗಳನ್ನು ವೆಚ್ಚ ಭರಿಸಿ ಕನ್ನಡ ಶಾಲೆಗೆ ಡೆಸ್ಕಗಳನ್ನು ವಿತರಿಸಲಾಗಿದೆ. ಈ ಬಗ್ಗೆ ಶಾಲಾ ಮುಖ್ಯೋಪಾಧ್ಯಾಯರು ಸಾಮಗ್ರಿಗಳು ತಲುಪಿದ ಬಗ್ಗೆ ದೃಢೀಕರಣ ನೀಡಿದ್ದಾರೆ. ಮಾಹಿತಿ ನೀಡುವ ಸಂದರ್ಭದಲ್ಲಿ ತಪ್ಪಾಗಿ ನಮೂದಾಗಿದ್ದರಿಂದ, ಈ ರೀತಿಯ ಹಣ ದುರುಪಯೋಗವಾಗಿದೆಯೆಂದು ಕಂಡು ಬಂದಿದ್ದು, ಇದರಿಂದ ಸರ್ಕಾರದ ಹಣ ದುರುಪಯೋಗವಾಗಿಲ್ಲ. ಕಾರಣ ತಮ್ಮ ಕರ್ತವ್ಯಲೋಪ ಇರುವುದಿಲ್ಲವೆಂದು ತಿಳಿಸಿರುತ್ತಾರೆಂದು ಮಾನ್ಯ ಉಪಲೋಕಾಯುಕ್ತರ ವರದಿಯಲ್ಲಿ ನಮೂದಿಸಿರುತ್ತಾರೆ.

ಎದುರುದಾರರ ಆಕ್ಷೇಪಣೆಗೆ ದೂರುದಾರರಿಂದ ಪ್ರತ್ಯುತ್ತರವನ್ನು ಕೇಳಲಾಗಿ, ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ ಎದುರುದಾರರ ಆಕ್ಷೇಪಣೆಯ ಅಂಶಗಳನ್ನು ಅಲ್ಲಗಳೆದು, ದೂರಿನಲ್ಲಿನ ಅಂಶಗಳನ್ನೆ ಪುನರುಚ್ಛರಿಸಿದ್ದು, ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಈ ಕೆಳಕಂಡ ಅಂಶ ಕಂಡು ಬಂದಿರುತ್ತದೆಂದು ಮಾನ್ಯ ಉಪಲೋಕಾಯುಕ್ತರ ವರದಿಯಲ್ಲಿ ತಿಳಿಸಲಾಗಿರುತ್ತದೆ.

i. ಚವಡಾಳ ಗ್ರಾಮದಲ್ಲಿ ಉರ್ದು ಶಾಲೆ ಇಲ್ಲ, ಕನ್ನಡ ಶಾಲೆ ಮಾತ್ರ ಇದೆಯೆಂದು ಎದುರುದಾರರು ಒಪ್ಪಿದ್ದು, ಸದರಿ ಶಾಲೆಗೆ ಡೆಸ್ಕಗಳನ್ನು ವಿತರಿಸುವ ಬಗ್ಗೆ ರೂ. 76,981/- ಖರ್ಚಾಗಿದ್ದು, ಆದರೆ ಕನ್ನಡ ಶಾಲೆಗೆ ಬದಲಾಗಿ ಉರ್ದು ಶಾಲೆಗೆ ವಿತರಿಸಲಾಗಿದೆಯೆಂದು ನಮೂದಾಗಿದೆ. ಎದುರುದಾರರು ಈ ರೀತಿ ಡೆಸ್ಕ್‌ಗಳನ್ನು ವಿತರಿಸುವ ಬಗ್ಗೆ ನೀಡಲಾದ ಮಾಹಿತಿಯಲ್ಲಿ ಕನ್ನಡ ಶಾಲೆಗೆ ಬದಲಾಗಿ ಉರ್ದು ಶಾಲೆಯೆಂದು ನಮೂದಿಸಿ ಕರ್ತವ್ಯಲೋಪ ಎಸಗಿದ್ದಾರೆ. ಎದುರುದಾರರು ಆ ಗ್ರಾಮದಲ್ಲಿ ಉರ್ದು ಶಾಲೆ ಇದೆಯೇ ಅಥವಾ ಇಲ್ಲವೇ ಎಂಬ ಬಗ್ಗೆ ಸರಿಯಾದ ಮಾಹಿತಿ ಪಡೆದು ಪರಿಶೀಲಿಸಿದ ನಂತರ ಸರ್ಕಾರಕ್ಕೆ ಅನುದಾನ ಕೋರಿ ಮನವಿ ಸಲ್ಲಿಸುವುದು ಅವರ ಆದ್ಯ ಕರ್ತವ್ಯವಾಗಿದೆ. ಆದರೆ,

ಸರಿಯಾದ ರೀತಿ ಶಾಲೆಯ ಬಗ್ಗೆ ಪರಿಶೀಲಿಸದೇ ತಪ್ಪು ಮಾಹಿತಿ ನೀಡಿದ್ದಾರೆ. ಸದರಿ ಶಾಲೆಗೆ ಡೆಸ್ಕ್‌ಗಳನ್ನು ವಿತರಿಸಲಾದ ಬಗ್ಗೆ ಪೂರಕ ದಾಖಲೆಗಳನ್ನು ಹಾಜರುಪಡಿಸಿಲ್ಲ. ಕಾರಣ, ಸದರಿ ಎದುರುದಾರರ ಕರ್ತವ್ಯಲೋಪ ಮತ್ತು ಹಣ ದುರುಪಯೋಗವಾಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ.

ಕಡತದಲ್ಲಿನ ಸಂಗತಿಗಳನ್ನು ಹಾಗೂ ದಾಖಲಾತಿಗಳನ್ನು ಎದುರುದಾರರ ಆಕ್ಷೇಪಣೆಗಳನ್ನು ಕೂಲಂಕುಷವಾಗಿ ಪರಿಶೀಲಿಸಲಾಗಿ, ಎದುರುದಾರರು ಸರ್ಕಾರಿ ನೌಕರರಾಗಿ, ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವೆಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ/ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿಗಳು 1966ರ ನಿಯಮ 3(i)(ii) (iii)ರನ್ನು ಉಲ್ಲಂಘಿಸಿರುವುದರಿಂದ, ಸದರಿ ಅಧಿಕಾರಿಯ ವಿರುದ್ಧ ಇಲಾಖಾ ವಿಚಾರಣೆಯನ್ನು ಕೈಗೊಳ್ಳಲು ಪ್ರಕರಣವನ್ನು ತಮಗೆ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 14(ಎ) ರನ್ವಯ ವಹಿಸಿಕೊಡುವಂತೆ ಮಾನ್ಯ ಉಪಲೋಕಾಯುಕ್ತರು ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3) ರನ್ವಯ ಮಾಡಿರುವ ಶಿಫಾರಸ್ಸನ್ನು ಕಳುಹಿಸಿಕೊಡುತ್ತಾ, ಅಂತೆಯೇ ಕ್ರಮವಹಿಸುವಂತೆ ನಿಬಂಧಕರು, ರವರು ಕೋರಿರುತ್ತಾರೆ. ಹಾಗೆಯೇ ಸದರಿ ವರದಿಯಲ್ಲಿ ಎದುರುದಾರರಿಂದ ದುರುಪಯೋಗದ ಹಣ ರೂ. 76,981/-ನ್ನು ಕಾನೂನಿನಂತೆ ವಸೂಲಿ ಮಾಡಲು ಹಾಗೂ ಸದರಿಯವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸುವಂತೆಯೂ ಸಹ ನಿರ್ದೇಶಿಸಿರುತ್ತಾರೆ.

ಹಣದುರುಪಯೋಗ ರೂ. 76,981/-ಗಳನ್ನು ಸದರಿ ಅಧಿಕಾರಿಯಿಂದ ವಸೂಲು ಮಾಡಲು ಹಾಗೂ ಸದರಿಯವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಲು ಕ್ರಮಕೈಗೊಳ್ಳುವಂತೆ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಹಾವೇರಿ ಇವರಿಗೆ ದಿನಾಂಕ:28.10.2016ರ ಪತ್ರದಲ್ಲಿ ಸೂಚಿಸಲಾಗಿರುತ್ತದೆ.

ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸು/ಅದರೊಂದಿಗೆ ಅಡಕವಾಗಿರುವ ದಾಖಲಾತಿಗಳನ್ನು ಪರಿಶೀಲಿಸಲಾಗಿ, ಎದುರುದಾರರಾದ ಶ್ರೀ ಎಸ್.ಎಂ.ಕುರ್ತಕೋಟಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಸವಣೂರು, ಇವರು ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ

ಲೋಪವೆಸಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ. ಸದರಿ ಅಧಿಕಾರಿಯ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ, ಮಾನ್ಯ ಉಪಲೋಕಾಯುಕ್ತರು-1, ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3) ರನ್ವಯ, ಮಾಡಿರುವ ಶಿಫಾರಸ್ಸಿನಂತೆ, ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ರನ್ವಯ, ವಿವರವಾದ ಇಲಾಖಾ ವಿಚಾರಣೆಯನ್ನು ಜರುಗಿಸಲು, ಅದೇ ನಿಯಮಾವಳಿಗಳ ನಿಯಮ 14(ಎ) ರನ್ವಯ, ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸಲು, ಸರ್ಕಾರವು ತೀರ್ಮಾನಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 199 ವಿಸೇಬಿ 2016 ಬೆಂಗಳೂರು ದಿನಾಂಕ: 28-10-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಮೇರೆಗೆ, ಶ್ರೀ ಎಸ್.ಎಂ.ಕುರ್ತಕೋಟಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಸವಣೂರು, ಇವರ ವಿರುದ್ಧದ ಆರೋಪಗಳ ಸಂಬಂಧ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ಮತ್ತು 11(ಎ) ರನ್ವಯ ಸಮಗ್ರವಾದ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಅದೇ ನಿಯಮಾವಳಿಗಳ ನಿಯಮ-14(ಎ)ರ ಪ್ರಕಾರ ಮಾನ್ಯ ಉಪಲೋಕಾಯುಕ್ತರು-1, ಕರ್ನಾಟಕ ಲೋಕಾಯುಕ್ತ ರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

28/10/2016

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಜಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು-1 ಕರ್ನಾಟಕ ಲೋಕಾಯುಕ್ತ, ಬೆಂಗಳೂರು
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಬೆಳಗಾವಿ.
4) ನಿರ್ದೇಶಕರು (ಪಂ.ರಾಜ್-1), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು-01.

**ಪ್ರತಿ ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು

2) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ ಜಂಟಿ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.